ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.

<u>ಸಿ.ಸಿ.17/2025</u>

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಮುತ್ತುರಾಜ್ | ಪಿ.ಡಬ್ಲ್ಯೂ.1 |
| ತಂದೆಯ ಹೆಸರು | : | ಶಿವಪ್ಪ | ಸಿ.ಡಬ್ಲ್ಯೂ.1 |
| ವಯಸ್ಸು | : | 25 ವರ್ಷ | |
| ವೃತ್ತಿ | : | ಕೂಲಿ ಕೆಲಸ | |
| ವಾಸ | : | ದಂಟರಮಕ್ಕಿ | |

<u>ದಿನಾಂಕಃ 11-11-2025 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

<u>ಮುಖ್ಯ ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-</u>

ಆರೋಪಿ ಗೊತ್ತು. ಚಾಸಾ-2 ರವರ ಪರಿಚಯವಿದೆ. ಚಾಸಾ-3 ರಿಂದ 5 ರವರ ಪರಿಚಯವಿಲ್ಲ. 2022 ನೇ ಇಸವಿಯಲ್ಲಿ ನಾನು ಚಿಕ್ಕಮಗಳೂರು ಬಸ್ ನಿಲ್ದಾಣದಲ್ಲಿ ನಿಂತಿದ್ದಾಗ ಪೊಲೀಸರು ನನ್ನನ್ನು ಠಾಣೆಗೆ ಕರೆದುಕೊಂಡು ಹೋಗಿ ಸಹಿಯನ್ನು ಹಾಕಿಸಿರುತ್ತಾರೆ. ಇದನ್ನು ಹೊರತುಪಡಿಸಿ ಬೇರೆ ಯಾವುದೇ ವಿಚಾರ ನನಗೆ ತಿಳಿದಿರುವುದಿಲ್ಲ. ಪೊಲೀಸರು ಬಳಿ ಒಂದು ಸಿ.ಡಿ ಇತ್ತು. ನನ್ನ ಸಮಕ್ಷಮ ಸದರಿ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿರುವುದಿಲ್ಲ. 2 ನೋಟೀಸ್ ಅನ್ನು ಹಾಗೂ 2 ಮಹಜರ್ ಅನ್ನು ನೋಡುತ್ತಿದ್ದು ಅದನ್ನು ನಿಪಿ-1 ಮತ್ತು ನಿಪಿ-2 ಹಾಗೂ ನಿಪಿ-3 ಮತ್ತು ನಿಪಿ-4 ಎಂದು ಗುರುತಿಸಲಾಗಿ ನನ್ನ ಸಹಿ ನಿಪಿ-1(ಎ), ನಿಪಿ-2(ಎ), ನಿಪಿ-3(ಎ)

ಮತ್ತು ನಿಪಿ-4(ಎ) ಇರುತ್ತದೆ. ಯಾವ ವಿಚಾರಕ್ಕಾಗಿ ನಾನು ಸದರಿ ಸಹಿಯನ್ನು ಹಾಕಿರುತ್ತೇನೆ ಎಂದು ನನಗೆ ಗೊತ್ತಿಲ್ಲ. 3 ಫೋಟೋಗಳನ್ನು ನೋಡುತ್ತಿದ್ದು ನಿಪಿ-5 ರಿಂದ ನಿಪಿ-7 ಎಂದು ಗುರುತಿಸಲಾಯಿತು. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಎಪಿಪಿರವರು ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಯನ್ನು ನೀಡಲಾಯಿತು)

<u>ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ-</u>

ದಿಃ19.02.2022 ರಂದು ಸಂಜೆಃ05.05 ರಿಂದ 07.00 ಗಂಟೆಯವರೆಗೆ ಪೊಲೀಸ್ ಠಾಣೆಯಲ್ಲಿ ನಿಪಿ-2 ರಂತೆ ಮಹಜರ್ ಅನ್ನು ತಯಾರಿಸಿದಾಗ ನಾನು ಸ್ಥಳದಲ್ಲಿ ಹಾಜರಿದ್ದು ಮಹಜರ್ ನ ವಿಷಯಗಳನ್ನು ತಿಳಿದುಕೊಂಡು ನಿಪಿ-2(ಎ) ರಂತೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ.

ದಿಃ15.07.2022 ರಂದು ಪೊಲೀಸ್ ಠಾಣೆಯ ಸೈಬರ್ ಲ್ಯಾಬ್ ನಲ್ಲಿ ಬೆಳಗ್ಗೆಃ11.00 ರಿಂದ ಮಧ್ಯಾಹ್ನಃ01.00 ಗಂಟೆಯವರೆಗೆ ನಿಪಿ-4 ರಂತೆ ಅಮಾನತ್ತು ಪಂಚನಾಮೆಯನ್ನು ತಯಾರಿಸಿ ಮೊಬೈಲ್ ಅನ್ನು ಅಮಾನತ್ ತುಪಡಿಸಿಕೊಂಡಾಗ ನಾನು ಸ್ಥಳದಲ್ಲಿ ಹಾಜರಿದ್ದು ಮಹಜರ್ ನ ವಿಷಯಗಳನ್ನು ತಿಳಿದುಕೊಂಡು ನಿಪಿ-4(ಎ) ರಂತೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಈಗ ನನಗೆ ತೋರಿಸುತ್ತಿರುವ ಮೊಬೈಲ್ ಅನ್ನೇ ಸದರಿ ದಿನ ಪೊಲೀಸರು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿ. ಸದರಿ ಮೊಬೈಲ್ ಅನ್ನು ಮು.ಮಾ.1 ಎಂದು ಗುರುತಿಸಲಾಯಿತು. ಅದೇ ರೀತಿ ಈಗ ನನಗೆ ತೋರಿಸುತ್ತಿರುವ ಸಿ.ಡಿ.ಯನ್ನೇ ಠಾಣೆಯಲ್ಲಿ ತೋರಿಸಿರುತ್ತಾರೆ ಎಂದರೆ ಸರಿ.

ಸದರಿ ಸಿ.ಡಿ.ಯನ್ನು ಮು.ಮಾ.2 ಎಂದು ಗುರುತಿಸಲಾಯಿತು. ಸಾಕ್ಷಿದಾರರು ಸ್ವತಃ ನುಡಿಯುತ್ತಾರೆ ಅದರಲ್ಲಿ ಕೆಟ್ಟದ್ದಾಗಿ ವೀಡಿಯೋ ಇತ್ತು. ಆ ಸಮಯದಲ್ಲಿ ನನ್ನ ಸಹಿಯನ್ನು ಮು.ಮಾ.1 ಮತ್ತು 2 ರ ಮೇಲೆ ಅಂಟಿಸಿರುವ ಚೀಟಿಯ ಮೇಲೆ ಪಡೆದುಕೊಂಡಿರುತ್ತಾರೆ ಎಂದರೆ ಸರಿ.

ದಿಃ19.02.2022 ರಂದು ನಾನು ಪೊಲೀಸರ ಮುಂದೆ ಈಗ ಓದಿ ಹೇಳಿದಂತೆ ‘ದಿಃ19.02.2022 ರಂದು ಸಂಜೆಃ04.50 ಗಂಟೆಯಲ್ಲಿ --- ಪುನಃ ನೋಡಿದರೂ ಸಹ ಗುರುತಿಸುತ್ತೇನೆ’ ಎಂದು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆ ಭಾಗವನ್ನು ನಿಪಿ-8 ಎಂದು ಗುರುತಿಸಲಾಯಿತು. ನನಗೆ ಎಲ್ಲಾ ವಿಚಾರ ಗೊತ್ತಿದ್ದರೂ ಕೂಡಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-</u>

ಪೊಲೀಸರು ಮಹಜರ್ ನಲ್ಲಿ ಏನೇನು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಮು.ಮಾ.1 ಮೊಬೈಲ್ ನಲ್ಲಿ ಇರುವ ವಿಷಯಗಳನ್ನು ಯಾರು ರೆಕಾರ್ಡ್ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸಿ.ಡಿ. ಯನ್ನು ನನ್ನ ಮುಂದೆ ಪ್ಲೇ ಮಾಡಿರುವುದಿಲ್ಲ ಹಾಗೂ ಅದನ್ನು ಹೇಗೆ ತಯಾರಿಸಲಾಗಿರುತ್ತದೆ ಎಂದು ನನಗೆ ತಿಳಿದಿರುವುದಿಲ್ಲ ಎಂದರೆ ಸರಿ. ಪೊಲೀಸರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿರುವುದಿಲ್ಲ ಎಂದರೆ ಸರಿ. ಪೊಲೀಸರು ಬರೆದಿಟ್ಟಂತಹ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿ.

C.C.No.17/2025
PW-1 CW-1

<u>ಮರು ವಿಚಾರಣೆಃ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

ಎಸ್ಆರ್ಃ